OCTOBER 19, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ರಾಜ್ಯಾದ್ಯಂತ ಒಟ್ಟು 20 ಸಾವಿರ ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ, ಗ್ರಾಮಗಳ ಕಟ್ಟಕಡೆಯ ವ್ಯಕ್ತಿಗೂ ಶುದ್ಧ ಕುಡಿಯುವ ನೀರು ಸಿಗಬೇಕು ಎಂಬುದು ಸರ್ಕಾರದ ಆಶಯವಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ ಪಾಟೀಲ್ ಹೇಳಿದರು. ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ, ‘ಮಾನವ ಅಭಿವೃದ್ಧಿ ಸೂಚ್ಯಂಕ ಹಾಗೂ ಸುಸ್ಥಿರ ಅಭಿವೃದ್ಧಿ ಗುರಿಗಳು’ ಕುರಿತ ಜರುಗಿದ ಉಪನ್ಯಾಸ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಶುದ್ಧ ಕುಡಿಯುವ ನೀರು ಮಾನವ ಹಕ್ಕಾಗಬೇಕು ಎಂದರು. ಕರ್ಮಯೋಗಿ ಮಿ  ’ನ್ ನ ಡಾಕ್ಟರ ಬಾಲಸುಬ್ರಹ್ಮಣ್ಯಂ, ಮಾನವ ಅಭಿವೃದ್ಧಿ ಸೂಚ್ಯಂಕ ಹಾಗೂ ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತು ಉಪನ್ಯಾಸ ನೀಡಿದರು.

<><><>

ರಾಜ್ಯಾದ್ಯಂತ ಕಳೆದ ಎರಡೂವರೆ ವರ್ಷಗಳಲ್ಲಿ 11 ಕೋಟಿ ಸಸಿಗಳನ್ನು ನೆಡಲಾಗಿದೆ, 7 ಸಾವಿರ ಎಕರೆ, ಅರಣ್ಯ ಒತ್ತುವರಿ ತೆರವುಗೊಳಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಸಚಿವ ಈಶ್ವರ ಖಂಡ್ರೆ ಹೇಳಿದರು. ಬೀದರ ನಗರದ ನೆಹರೂ ಕ್ರೀಡಾಂಗಣದಲ್ಲಿ , ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯ, ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಏಕ ಬಳಕೆ ಪ್ಲಾಸ್ಟಿಕ್ ಉಪಯೋಗಿಸದೆ, ‘ಸ್ವಚ್ಛ ಬೀದರ, ಸುಂದರ ಬೀದರ’, ಸಂಕಲ್ಪಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು. ಪರಿಸರ ದಿನ ಸ್ಪರ್ಧೆಯಲ್ಲಿ ಬಹುಮಾನ ಸ್ವೀಕರಿಸಿದ, ಯುನೀಕ್ ಪಬ್ಲಿಕ್ ಶಾಲೆಯ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿನಿ ವೈಷ್ಣವಿ, ಪ್ರದೇಶ ಸಮಾಚಾರದ ಮೂಲಕ ದೀಪಾವಳಿ ಹಬ್ಬದ ಸಂದರ್ಭ ಎಲ್ಲರೂ, ಹಸಿರು ಪಟಾಕಿ ಬಳಸುವಂತೆ ಕೋರಿದರು.

<><><>

ಧ್ವನಿ: ವೈಷ್ಣವಿ 29 ಸೆಕೆಂದುಗಳು

<><><>

ದೀಪಾವಳಿ ಹಬ್ಬದ ಸಂದರ್ಭ, ಮನೋರಂಜನೆಗೆ ಗಾಳಿಪಟಗಳನ್ನು ಜವಾಬ್ದಾರಿಯಿಂದ ಹಾರಿಸಬೇಕು ಎಂದು ಹುಬ್ಬಳ್ಳಿ – ಧಾರವಾಡ ಸಿಟಿ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಗಾಳಿಪಟಕ್ಕೆ ಮಾಂಜಾ ದಾರ ಬಳಸಬಾರದು, ದಾರ ತುಂಡಾದಲ್ಲಿ ಅದನ್ನು ಕೂಡಲೇ ತೆಗೆಯಬೇಕು, ಜನರು, ಪ್ರಾಣಿ ಹಾಗೂ ಪಕ್ಷಿಗಳ ಜೀವಕ್ಕೆ ಅಪಾಯ ಒಡ್ಡದಂತೆ ಜಾಗ್ರತೆ ಪಾಲಿಸಬೇಕು ಎಂದಿದ್ದಾರೆ.

<><><>

ದೀಪಾವಳಿ ಹಬ್ಬದ ಹಿನ್ನೆಲೆ, ಇಂದು ಮತ್ತು ನಾಳೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ, ಕೆ.ಇ.ಎ ಕಾಲ್ ಸೆಂಟರ್ ಕಾರ್ಯ ನಿರ್ವಹಿಸುವುದಿಲ್ಲ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

<><><>

ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ, 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಅನ್ವಯವಾಗುವಂತೆ, ನಾಲ್ಕು ನೂರ 22 ಸ್ನಾತಕೋತ್ತರ ಪದವಿ ಸೀಟುಗಳು ಸಂಖ್ಯೆ ಹೆಚ್ಚಳ ಮಾಡಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಡಾಕ್ಟರ ಶರಣಪ್ರಕಾಶ ಪಾಟೀಲ್ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

<><><>

ಹಾಸ್ಯ ಸಾಹಿತಿ ಕೊಪ್ಪಳದ, ಗಂಗಾವತಿ ಪ್ರಾಣೇಶ್ ಅವರ ತಾಯಿ ಸತ್ಯವತಿ ಬಾಯಿ ಅವರು ನಿನ್ನೆ ನಿಧನರಾದರು, ಅವರಿಗೆ 85 ವರ್ಷ ವಯಸ್ಸಾಗಿತ್ತು. ಅಂತ್ಯಕ್ರಿಯೆ ಇಂದು ಬೆಳಗ್ಗೆ 10 ಗಂಟೆಗೆ ಗಂಗಾವತಿ ನಗರದಲ್ಲಿ ಜರುಗಿತು ಎಂದು ಕುಟುಂಬ ವರ್ಗದವರು ತಿಳಿಸಿದ್ದಾರೆ.

<><><>

ಕೌಶಲ ಆಧಾರಿತ, ಉನ್ನತ ಶಿಕ್ಷಣ ತಮ್ಮ ಆದ್ಯತೆ ಎಂದು, ಉನ್ನತ ಶಿಕ್ಷಣ ಖಾತೆ ಸಚಿವ ಎಂ.ಸಿ. ಸುಧಾಕರ ತಿಳಿಸಿದ್ದಾರೆ. ಉಡುಪಿ ಜಿಲ್ಲೆ, ಬಾರಕೂರಿನಲ್ಲಿ, ಶ್ರೀಮತಿ ರುಕ್ಮಿಣಿ ಶೆಟ್ಟಿ ಸ್ಮಾರಕ, ರಾಷ್ಟ್ರೀಯ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದ, ನೂತನ ಸಭಾಂಗಣಕ್ಕೆ, ಶಿಲಾನ್ಯಾಸ ನೆರವೇರಿಸಿ, ಮಾತನಾಡಿದರು. ಸಾವಿರದ 242, ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ, ನೇಮಕಾತಿ ಪ್ರಕ್ರಿಯೆ ನಡೆಯಲಿದೆ ಎಂದರು.

<><><>

ಧಾರವಾಡದ, ಕೋಳಿಕೆರೆ ಸ್ಮಶಾನ ಹಾಗೂ, ಹುಬ್ಬಳ್ಳಿಯ ಹೊಸೂರು ಬಳಿ, ಘನ ತ್ಯಾಜ್ಯ ನಿರ್ವಹಣೆ ವಾಹನಗಳಿಗೆ, ಅತ್ಯಾಧುನಿಕ ಪಾರ್ಕಿಂಗ್ ವ್ಯವಸ್ಥೆ ನಿರ್ಮಿಸಲಾಗಿದೆ. ನಗರ ತ್ಯಾಜ್ಯ ನಿರ್ವಹಣೆಯ, ಆಟೋ ಟಿಪ್ಪರ್‌ಗಳು ಹಾಗೂ ಇತರ ತ್ಯಾಜ್ಯ ಸಾಗಣೆ ವಾಹನಗಳಿಗೆ, ಸುರಕ್ಷಿತ ಮತ್ತು ವ್ಯವಸ್ಥಿತ ಪಾರ್ಕಿಂಗ್ ಸೌಲಭ್ಯ ಒದಗಿಸಲಾಗಿದೆ. ನಗರದ ತ್ಯಾಜ್ಯ ನಿರ್ವಹಣೆ ವ್ಯವಸ್ಥೆ, ಸುಗಮವಾಗಲಿದ್ದು, ಸ್ವಚ್ಛತೆಯ ದಿಕ್ಕಿನಲ್ಲಿ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ ಎಂದು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ತಿಳಿಸಿದೆ.

<><><>

ಚಿಕ್ಕಮಗಳೂರು ಜಿಲ್ಲೆ, ಮಲ್ಲೇನಹಳ್ಳಿ–ಬಿಂಡಿಗಾ ಗ್ರಾಮದ, ಬಿಂಡಿಗ ದೇವಿರಮ್ಮ ದೇವಸ್ಥಾನದಲ್ಲಿ, ವಾರ್ಷಿಕ ದರ್ಶನದ ವ್ಯವಸ್ಥೆ ಇಂದು ಬೆಳಗ್ಗಿನಿಂದ ಆರಂಭಗೊಂಡಿದೆ. ದೀಪಾವಳಿ ಹಿನ್ನೆಲೆ ಸಾವಿರಾರು ಭಕ್ತರು ದೇವಿರಮ್ಮ ಬೆಟ್ಟಕ್ಕೆ ಆಗಮಿಸಿ, ದೇವಿಯ ದರ್ಶನ ಪಡೆಯುತ್ತಿದ್ದಾರೆ.

<><><>

ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲೂಕು ಇಂಡ್ಲವಾಡಿ ಬಳಿ 75 ಎಕರೆ ಪ್ರದೇಶದಲ್ಲಿ, 2 ಸಾವಿರದ 350 ಕೋಟಿ ರೂಪಾಯಿ ವೆಚ್ಚದಲ್ಲಿ, 80 ಸಾವಿರ ಆಸನ ಸಾಮರ್ಥ್ಯದ ಬೃಹತ್ ಕ್ರಿಕೆಟ್ ಸ್ಟೇಡಿಯಂ ನಿರ್ಮಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>